# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 136

03-04-2021 ರಂದು ಶನಿವಾರ ಬೆಳಿಗ್ಗೆ 11.30 ಘಂಟೆಗೆ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ವಾರ್ಡ್ ಹಂತದ ಸಮಿತಿ ಸಭೆಯನ್ನು ಡಾ॥ ಅಲ್ಲಮಪ್ರಭು. ಸಹಾಯಕ ನಿರ್ದೇಶಕರು, (ಪಶುಪಾಲನೆ-ಪಶ್ಚಿಮ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 136 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಡಾ. ಅಲ್ಲಮಪ್ರಭು ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

ವಾರ್ಡ್ ಸದಸ್ಯರಾದ ಶ್ರೀ ಉಮೇಶ್ ರವರು 2021-22ನೇ ಸಾಲಿನಲ್ಲಿ ಕಾಮಗಾರಿಗಳನ್ನು ನಿರ್ವಹಿಸುವ ಬಗ್ಗೆ ಸಭೆಯಲ್ಲಿ ವಿಷಯ ಮಂಡಣೆ ಮಾಡಿದರು ಹಾಗೂ 2021-22ನೇ ಸಾಲಿನ ಅಯವ್ಯಯದ ಬಗ್ಗೆ ಸಭೆಯಲ್ಲಿ ಪ್ರಾಸ್ತಪಿಸಿದರು

ಸದರಿ ವಿಷಯದ ಬಗ್ಗೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ 2021-22ನೇ ಸಾಲಿನ ಅಯವ್ಯಯದ ಅಂದಾಜುಗಳ ಅನುಸೂಚಿಗಳು ಪುಸ್ತಕ ಬಿಡುಗಡೆಯಾಗಿದ್ದು ಮಾರ್ಪಡಿನೊಂದಿಗೆ ಸರ್ಕಾರದ ಅನುಮೋದನೆಯ ನಂತರ 2021-22ನೇ ಸಾಲಿನ ಅಯವ್ಯಯದ ಪುಸ್ತಯದಲ್ಲಿ ವಾರ್ಡ್‌ಗಳಿಗೆ ನಿಗಧಿಪಡಿಸಿದ ಅನುದಾನದಲ್ಲಿ ಕ್ರಿಯಾ ಯೋಜನೆಯ ನಂತರ ಪರಿಶೀಲಿಸಿ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ಸದಸ್ಯರಾದ ಶ್ರೀ ಮುಜಾಮೀಲ್ ಪಾಷ ರವರು 2019–20, 2020–2021ನೇ ಸಾಲಿನಲ್ಲಿ ಸಾಲಿನಲ್ಲಿ ಕಲ್ಯಾಣ ಕಾರ್ಯಕ್ರಮಗಳಡಿಯಲ್ಲಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದ ಬಗ್ಗೆ ಸಭೆಯಲ್ಲಿ ವಿಷಯವನ್ನು ಮಂಡಿಸಿದರು.

ಅಧ್ಯಕ್ಷರು 2019–20 ಮತ್ತು 2020–21ನೇ ಸಾಲಿನಲ್ಲಿ ಅರ್ಜಿಸಲ್ಲಿಸಿದ್ದು ಕರೋನ–19 ಸೋಂಕಿನಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ, ಈ ಬಗ್ಗೆ ಮುಂದಿನ ದಿನಗಳಲ್ಲಿ ಕಲ್ಯಾಣಧಿಕಾರಿಗಳನ್ನು ಸಂಪರ್ಕಿಸಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಚರ್ಚಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಸಭೆಯಲ್ಲಿ ಪರಿಶಿಷ್ಟ ಜಾತಿ/ ಪಂಗಡ ಮತ್ತು ಹಿಂದುಳಿದ ಅಲ್ಪಸಂಖ್ಯಾತರಿಗೆ 2020–21ನೇ ಸಾಲಿನಲ್ಲಿ ಪ್ರತಿ ವಾರ್ಡ್‌ಗೆ 10 ಮನೆಗಳನ್ನು ನಿರ್ಮಾಣ ಮಾಡಲು ಅಯವ್ಯಯ ಪುಸ್ತಕದಲ್ಲಿ ಅನುದಾನ ಮೀಸಲಿರಿಸಿದ್ದು ಇದುವರೆವಿಗೂ ವಾರ್ಡ್–136ರ ವ್ಯಾಪ್ತಿಯಲ್ಲಿ ಯಾವುದೇ ಅನುದಾನ ಬಿಡುಗಡೆಯಾಗದಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಿಸೆಂಬರ್ ಸಭೆಯಲ್ಲಿ 10 ಜನ ಫಲಾನುಭವಿಗಳನ್ನು ಗುರ್ತಿಸಿ ಅನುದಾನ ಬಿಡುಗಡೆ ಮಾಡಲು ಸಭಾ ನಿರ್ಣಯವನ್ನು ಕೈಗೊಂಡು ಕಡತವನ್ನು ಸಂಬಂಧಿಸಿದ ಕಛೇರಿಗೆ ಕಳುಹಿಸಲಾಗಿದ್ದು ಷಕ್ಷಮ ಪ್ರಾಧಿಕಾರದ ಅನುಮೋದನೆಯ ನಂತರ ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಲು ಕಾರ್ಯದೇಶ ನೀಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಹಳೇ ಗುಡ್ಡದಹಳ್ಳಿ ಬಸ್ ನಿಲ್ದಾಣದಲ್ಲಿ ಕಾರು, ಲಾರಿ, ಮತ್ತು ಇತರೆ ವಾಹನಗಳನ್ನು ನಿಲ್ಲಿಸಿ ಬಸ್ ನಿಲ್ದಾಣಕ್ಕೆ ಬಿ.ಎಂ.ಟಿ.ಸಿ ಬಸ್‌ಗಳು ಬರುತ್ತಿರುವುದಿಲ್ಲ ಹಾಗೂ ಬಸ್ ನಿಲ್ದಾಣದಲ್ಲಿರುವ ಇಂದಿರ ಕ್ಯಾಂಟಿನ್‌ಗೆ ಸಾರ್ವಜನಿಕರು ಪ್ರವೇಶಿಸಲು ಕಷ್ಟವಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದು ಮಾರ್ಷಲ್‌ಗಳಿಗೆ ಮತ್ತು ಸಂಬಂದಿಸಿದ ಅಧಿಕಾರಿಗಳು ಪೊಲೀಸ್ ಠಾಣೆಗೆ ಮತ್ತು ಸಂಚಾರಿ ಪೊಲೀಸ್ ಠಾಣೆಗೆ ದೂರು ನೀಡಿ ಸೂಕ್ತ ಕ್ರಮ ಕೈಗೊಂಡು ವಾಹನ ನಿಲುಗಡೆಯನ್ನು ತೆರವುಗೊಳಿಸಲು ಸೂಚಿಸಿದರು.

ಮಾನ್ಯ ಅಧ್ಯಕ್ಷರು ಹಿಂದಿನ ಸಭೆಯಲ್ಲಿ ಘನತ್ಯಾಜ್ಯ ವಿಲೇವಾರಿಯ ಬಗ್ಗೆ ತೆಗೆದುಕೊಂಡ ನಿರ್ಣಯದಂತೆ ಕಿರಿಯ ಆರೋಗ್ಯ ಪರಿವೀಕ್ಷಕರನ್ನು ವಿವರಣೆ ನೀಡುವಂತೆ ಸಭೆಯಲ್ಲಿ ಕೋರಿದರು ಮತ್ತು ಪೌರ ಕಾರ್ಮಿಕರ ಮತ್ತು ಆಟೋಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ಮಂಡಿಸುವಂತೆ ಕೋರಿದರು.

ಕಿರಿಯ ಆರೋಗ್ಯ ಪರಿವೀಕ್ಷರು ಸಭೆಯಲ್ಲಿ ಕೈಗೊಂಡ ಕ್ರಮದ ಬಗ್ಗೆ ವಿವರವಾಗಿ ತಿಳಿಸಿದರು ಹಾಗೂ ಮುಂದಿನ ದಿನಗಳಲ್ಲಿ ಕಟ್ಟು ನಿಟ್ಟಿನ ಕ್ರಮ ಕೈಗೊಂಡು ಕಸದ ವಿಂಗಡನೆ, ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಬೇಸಿಗೆ ಕಾಲದಲ್ಲಿ ಸಾರ್ವಜನಿಕರಿಗೆ ಹೆಚ್ಚಿನ ಕುಡಿಯುವ ನೀರಿನ ಅವಶ್ಯಕವಾಗಿರುವುದರಿಂದ ದಿನ ಮತ್ತು ಸಮಯವನ್ನು ನಿಗಧಿ ಮಾಡಿ ಉತ್ತಮವಾಗಿ ನೀರು ಪೂರೈಕೆ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿರು.

ಬಿಡಬ್ಲೂಎಸ್‌ಎಸ್‌ಬಿ ಆಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು: ಬೆಸ್ಕಾಂ ಕಛೇರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಪುಸ್ತಕವನ್ನು ಮತ್ತು ಕೈಗೊಂಡ ಕ್ರಮದ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಬೆಸ್ಕಾಂ ಪ್ರತಿನಿಧಿಗೆ

-4

ತಿಳಿಸಿದರು

## ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ)<br>ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | 3/4/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | 03/04/2021 |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | |
| | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ)<br>ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ. ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮಿಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ)<br>ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ<br>ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

03/04/2021
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

3/4/2021
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ